# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 859 |
| ಸದಸ್ಯರ ಹೆಸರು | : | ಶ್ರೀ ಅರವಿಂದ ಕುಮಾರ್ ಅರಳಿ<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 13.12.2023 |
| ಉತ್ತರಿಸುವ ಸಚಿವರು | : | ಕಂದಾಯ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿರುವ ಗ್ರಾಮಾಂತರ ಪ್ರದೇಶಗಳಲ್ಲಿ ಗೋಮಾಳ ಜಮೀನನ್ನು ರೈತರಿಗೆ ಮಂಜೂರು ಮಾಡಲು ಪ್ರಸ್ತುತ ಇರುವ ನೀತಿ ನಿಯಮಾವಳಿ ಮತ್ತು ಷರತ್ತುಗಳೇನು; | ಸರ್ಕಾರಿ ಜಮೀನುಗಳಲ್ಲಿ ಅನಧಿಕೃತವಾಗಿ ಮಾಡುತ್ತಿರುವ ಸಾಗುವಳಿಯನ್ನು ಸಕ್ರಮಗೊಳಿಸುವ ಸಲುವಾಗಿ ಕರ್ನಾಟಕ ಭೂ ಕಂದಾಯ ಕಾಯ್ದೆ, 1964ರ ಕಲಂ 94ಎ, 94ಬಿ ಹಾಗೂ 94ಎ(4)ರಡಿ ಕ್ರಮವಾಗಿ ನಮೂನೆ 50, 53 ಹಾಗೂ 57ರಲ್ಲಿ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.<br>ನಮೂನೆ-50, 53 ಹಾಗೂ 57ರಡಿ ಸ್ವೀಕರಿಸಿರುವ ಅರ್ಜಿಗಳನ್ನು ಕರ್ನಾಟಕ ಭೂ ಕಂದಾಯ ನಿಯಮಗಳು, 1966ರ ನಿಯಮದ ಅಧ್ಯಾಯ XIII-ಎ ರಲ್ಲಿ ನಿರ್ದಿಷ್ಟ ಪಡಿಸಿರುವ ಭೂಮಿಯ ಅನಧಿಕೃತ ಅಧಿಭೋಗವನ್ನು ಸಕ್ರಮಗೊಳಿಸಲು ಇರುವ ಮಾನದಂಡಗಳನ್ನು ಅನುಸರಿಸಿ ನಿಯಮಾನುಸಾರ ಪರಿಶೀಲಿಸಿ ಅರ್ಹ ಅರ್ಜಿಗಳನ್ನು ಬಗರ್ ಹುಕುಂ ಸಾಗುವಳಿ ಸಕ್ರಮೀಕರಣ ಸಮಿತಿಯ ಮುಂದೆ ಮಂಡಿಸಲಾಗುತ್ತಿದೆ. |
| ಆ) | ಜಮೀನು ಹೊಂದಿರುವವರು ಅಥವಾ ಜಮೀನು ಇಲ್ಲದಿರುವವರು ಎಷ್ಟು ವರ್ಷಗಳಿಂದ ಗೋಮಾಳ ಜಮೀನನ್ನು ಉಳುಮೆ ಮಾಡುತ್ತಿದ್ದಾರೆ; ಮಂಜೂರು ಮಾಡಬಹುದಾದ ಎಷ್ಟು ಜಮೀನಿನ ವಿಸ್ತೀರ್ಣದ ಒಡೆತನ ಹೊಂದಿದ್ದು, ಆ ಜಮೀನಿಗೆ ಹೊಂದಿಕೊಂಡ ಗೋಮಾಳವನ್ನು ಉಳುಮೆ ಮಾಡುತ್ತಿದ್ದಾರೆ; ಇಂತಹವರಿಗೆ ಜಮೀನು ಮಂಜೂರು ಮಾಡಬಹುದೇ; | ಕರ್ನಾಟಕ ಭೂ ಕಂದಾಯ ನಿಯಮಗಳು 1966ರ ಅಧ್ಯಾಯ-XIII–ಎ ಭೂಮಿಯ ಅನಧಿಕೃತ ಅಧಿಭೋಗವನ್ನು ಸಕ್ರಮಗೊಳಿಸುವುದಕ್ಕೆ ಸಂಬಂಧಿಸಿದಂತೆ ಜಿಲ್ಲಾಧಿಕಾರಿಗಳು ನಿಯಮ 97(1)ರಂತೆ ನಿಗಧಿತ ವಿಸ್ತೀರ್ಣದ ಗೋಮಾಳವನ್ನು ನಿಗಧಿಪಡಿಸಿದ ನಂತರ ಹೆಚ್ಚುವರಿ ಗೋಮಾಳವನ್ನು ನಮೂನೆ-50, 53 ಮತ್ತು 57 ಅರ್ಜಿಗಳನ್ನು ಸಲ್ಲಿಸಿದ ಅನಧಿಕೃತ ಸಾಗುವಳಿದಾರರಿಗೆ ಕರ್ನಾಟಕ ಭೂ ಮಂಜೂರಾತಿ ನಿಯಮಗಳು 1969ರನ್ವಯ ಮಂಜೂರು ಮಾಡಬಹುದಾಗಿದೆ.<br>ಜಿಲ್ಲಾಧಿಕಾರಿಗಳು ಉಚಿತ ಗೋಮಾಳದ ವಿಸ್ತೀರ್ಣವನ್ನು ನಿಗದಿಪಡಿಸಿದ ನಂತರವೂ ಅಂತಹ ಭೂಮಿಯು ಉಚಿತ ಮೇವನ್ನು ಒದಗಿಸಲು ಲಭ್ಯವಿಲ್ಲದಿದ್ದಾಗ್ಯೂ ಅಥವಾ ಸಾಕಷ್ಟು ಇಲ್ಲದಿದ್ದಾಗ್ಯೂ ಸಹ ಅಂತಹ ಸಕ್ರಮವನ್ನು ನಿಯಮ 97(4-ಎ)ರನ್ವಯ ಒಂದು ಬಾರಿಯ ಕ್ರಮದ ಆಧಾರದ ಮೇಲೆ ಕರ್ನಾಟಕ ಭೂ ಕಂದಾಯ ನಿಯಮಗಳು 1966ರ ಅಧ್ಯಾಯ-XIII–ಎ ಅನಧಿಕೃತ ಕೃಷಿಯನ್ನು ಸಕ್ರಮಗೊಳಿಸುವ ಉದ್ದೇಶಗಳಿಗಾಗಿ ಅಂದರೆ ನಮೂನೆ-50 ಮತ್ತು ನಮೂನೆ-53ರಲ್ಲಿ ಬಾಕಿ ಇರುವ ಅರ್ಜಿಗಳಿಗೆ ಪರಿಗಣಿಸಬಹುದಾಗಿದೆ.<br>ಕರ್ನಾಟಕ ಭೂ ಕಂದಾಯ ನಿಯಮಗಳು, 1966ರ ನಿಯಮ 108ಎಫ್ ರನ್ವಯ ನಮೂನೆ-50 ಮತ್ತು 53ರ ಅರ್ಜಿಗಳನ್ನು ಪರಿಗಣಿಸುವಾಗ ಅರ್ಜಿದಾರನು ಹದಿನಾಲ್ಕನೇ ಏಪ್ರಿಲ್ 1990ರ ದಿನಕ್ಕೆ ಕಡೆಯಪಕ್ಷ ಹಿಂದಿನ ಮೂರು ವರ್ಷಗಳು ಕಡಿಮೆಯಿಲ್ಲದ ಅವಧಿಯ ನಿರಂತರ ಭೂಮಿಯ ಅನಧಿಕೃತ ಅಧಿಭೋಗನಾಗಿರಬೇಕು; |

ನಮೂನೆ 57ರ ಅರ್ಜಿಗಳನ್ನು ಪರಿಗಣಿಸುವಾಗ 2005ರ ಜನವರಿ ಮೊದಲ ದಿನಕ್ಕೆ ಮೂರು ವರ್ಷಕ್ಕಿಂತ ಕಡಿಮೆ ಇಲ್ಲದ ಅವಧಿಯವರೆಗೆ ನಿರಂತರವಾಗಿ ಅನಧಿಕೃತವಾಗಿ ಸಾಗುವಳಿ ಮಾಡುತ್ತಿರಬೇಕು;

ಅನುಸೂಚಿತ ಜಾತಿ ಮತ್ತು ಪಂಗಡಗಳಿಗೆ ಸೇರಿದ ವ್ಯಕ್ತಿಗಳ ಸಂದರ್ಭದಲ್ಲಿ ಅಂತಹ ಅವಧಿಯು ಒಂದು ವರ್ಷಕ್ಕಿಂತ ಕಡಿಮೆ ಇರತಕ್ಕದ್ದಲ್ಲ.

ಬಗರ್ ಹುಕುಂ ಸಕ್ರಮೀಕರಣ ಸಮಿತಿಯು ಅರ್ಜಿದಾರರು ಈಗಾಗಲೇ ಹೊಂದಿರುವ ಭೂಮಿಯ ಜೊತೆಗೆ ಹಾಗೇ ಮಂಜೂರಾದ ಭೂಮಿಯು, 'ಡಿ' ದರ್ಜೆ ಭೂಮಿ ಅಥವಾ ಅದಕ್ಕೆ ಸಮನಾದ ಭೂಮಿಯು ಎರಡು ಹೆಕ್ಟೇರ್ ಮೀರದಂತೆ ಸಕ್ರಮಗೊಳಿಸಲು ಅವಕಾಶವಿದೆ.

ಇ) ಬೀದರ್ ಜಿಲ್ಲೆಯಲ್ಲಿ ಇಲ್ಲಿಯವರೆಗೆ ಎಷ್ಟು ಗೋಮಾಳ ಜಮೀನು ಒಳಗೊಂಡಿರುತ್ತದೆ; ಮತ್ತು ಎಷ್ಟು ರೈತರಿಗೆ ಮಂಜೂರು ಮಾಡಲಾಗಿದೆ; (ವರ್ಷಾವಾರು ವಿವರ ನೀಡುವುದು)

ಬೀದರ್ ತಾಲ್ಲೂಕಿನಲ್ಲಿ ಒಟ್ಟು 20364-09 ಎಕರೆ/ಗುಂಟೆ ಜಮೀನಿದ್ದು ಮಂಜೂರು ಮಾಡಲಾದ ವಿವರ ಈ ಕೆಳಕಂಡಂತಿದೆ.

| ವರ್ಷ | ಪ್ರಕರಣಗಳ ಸಂಖ್ಯೆ |
|---|---|
| 1977-78 | 662 |
| 1992-93 | 601 |
| 1994-95 | 396 |
| 1996-97 | 54 |
| 1997-98 | 217 |
| 1998-99 | 08 |

ಚಿಟಗುಪ್ಪ ತಾಲ್ಲೂಕಿನಲ್ಲಿ ಒಟ್ಟು 247-02 ಎಕರೆ/ಗುಂಟೆ ಜಮೀನಿದ್ದು ಮಂಜೂರು ಮಾಡಲಾದ ವಿವರ ಈ ಕೆಳಕಂಡಂತಿದೆ.

| ವರ್ಷ | ಪ್ರಕರಣಗಳ ಸಂಖ್ಯೆ |
|---|---|
| 1976-77 | 11 |
| 1977-78 | 40 |
| 1978-79 | 03 |
| 1996-97 | 14 |

ಔರಾದ್ ತಾಲ್ಲೂಕಿನಲ್ಲಿ ಒಟ್ಟು 9237-09 ಎಕರೆ/ಗುಂಟೆ ಜಮೀನಿದ್ದು ಮಂಜೂರು ಮಾಡಲಾದ ವಿವರ ಈ ಕೆಳಕಂಡಂತಿದೆ.

| ವರ್ಷ | ಪ್ರಕರಣಗಳ ಸಂಖ್ಯೆ |
|---|---|
| 1977-78 | 307 |
| 1992-93 | 821 |
| 1993-94 | 265 |
| 1994-95 | 480 |

ಉಳಿದ ತಾಲ್ಲೂಕುಗಳಾದ ಹುಮನಾಬಾದ್, ಬಸವಕಲ್ಯಾಣ, ಹುಲಸೂರು, ಭಾಲ್ಕಿ, ಕಮಲನಗರ ತಾಲ್ಲೂಕುಗಳಲ್ಲಿ ಇಂತಹ ಪ್ರಕರಣಗಳು ಇರುವುದಿಲ್ಲ.

ಸಂಖ್ಯೆ: ಆರ್‌ಡಿ 134 ಎಲ್‌ಜಿಕ್ಯೂ 2023

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು